# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿಕಲಚೇತನಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವ್ಯಾಪ್ತಿಯಲ್ಲಿ ರಾಜ್ಯದ ಅನುದಾನಿತ ವಿಶೇಷ ಶಾಲೆ ಮತ್ತು ತರಬೇತಿ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರಿಗೆ 6ನೇ ವೇತನ ಆಯೋಗದ ಪರಿಷ್ಕೃತ ವೇತನ ಶ್ರೇಣಿಯನ್ನು ಜಾರಿಗೊಳಿಸುವ ಬಗ್ಗೆ

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 07 ಎಸ್.ಆರ್.ಪಿ 2012,ದಿ:21-4-2012.
2) ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ನಿಅಕಇ/ರಾಅ/6ನೇ ವೇತನ ಶ್ರೇಣಿ/2012-13/352, ದಿನಾಂಕ: 5-5-2012.

ಪ್ರಸ್ತಾವನೆ:

ಮೇಲೆ ಓದಲಾದ ಉಲ್ಲೇಖ(1) ರ ಸರ್ಕಾರದ ಆದೇಶದಲ್ಲಿ, ಕರ್ನಾಟಕ ರಾಜ್ಯ ಸರ್ಕಾರವು ರಾಜ್ಯ ಸರ್ಕಾರಿ ನೌಕರರಿಗೆ 6ನೇ ವೇನತ ಆಯೋಗದ ಪರಿಷ್ಕೃತ ವೇತನ ಶ್ರೇಣಿಯನ್ನು ದಿನಾಂಕ: 01-04-2012ರಿಂದ ಅನ್ವಯವಾಗುವಂತೆ ಜಾರಿಗೊಳಿಸಲಾಗಿದೆ.

ಮೇಲೆ ಓದಲಾದ ಉಲ್ಲೇಖ (2)ರ ಪತ್ರದಲ್ಲಿ, ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು, ಈ ಇಲಾಖೆಯಡಿಯಲ್ಲಿ 38 ವಿಶೇಷ ಶಾಲೆಗಳು ರಾಜ್ಯ ಅನುದಾನಕ್ಕೆ ಒಳಪಟ್ಟಿದ್ದು, ಜಿಲ್ಲಾ ಪಂಚಾಯತಿ ವ್ಯಾಪ್ತಿಗೆ ಬರುತ್ತವೆ. ಆದುದರಿಂದ ಸದರಿ ವಿಶೇಷ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸರ್ಕಾರದ ದಿನಾಂಕ: 21-4-2012ರಲ್ಲಿ ಆದೇಶ ಹೊರಡಿಸಿರುವಂತೆ 38 ಅನುದಾನಿತ ವಿಶೇಷ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ 6ನೇ ವೇತನ ಆಯೋಗದ ಪರಿಷ್ಕೃತ ವೇತನವನ್ನು ಅಳವಡಿಸಿಕೊಳ್ಳಲು ಸಿಬ್ಬಂದಿಗಳ ಹಿತದೃಷ್ಟಿಯಿಂದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 183 ಪಿಹೆಚ್‌ಪಿ 2012, ಬೆಂಗಳೂರು**
**ದಿನಾಂಕ: 18-7-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಇಲಾಖೆಯ ಜಿಲ್ಲಾ ಪಂಚಾಯತ್ ವ್ಯಾಪ್ತಿಯೊಳಗೆ ಬರುವ 38 ರಾಜ್ಯ ಅನುದಾನಿತ ವಿಶೇಷ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕ/ಶಿಕ್ಷಕೇತರ ಸಿಬ್ಬಂದಿಗಳಿಗೆ ಸರ್ಕಾರದ ಅದೇಶ ಸಂಖ್ಯೆ: FD 7 SRP 2012, ದಿನಾಂಕ: 21-4-2012ರನ್ವಯ 6ನೇ ವೇತನವನ್ನು ಅಳವಡಿಸಲು ಮಂಜೂರಾತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

..2